ಉತ್ತರ ನೀಡಲಾಗಿದೆ

**ಕರ್ನಾಟಕ ವಿಧಾನ ಪರಿಷತ್**

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 365
ಸದಸ್ಯರ ಹೆಸರು ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ: 03.02.2021
ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಇಲಾಖೆ

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | 2018-19 ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಲೆಕ್ಕ ಶೀರ್ಷಿಕೆ 5054-04-337-0-01-154 ರಡಿ ನಾಗಮಂಗಲ ತಾಲ್ಲೂಕಿನ ಕಾಂತಾಪುರ ಮಾರ್ಗ ರಾಜ್ಯ ಹೆದ್ದಾರಿ-19 (ಎನ್.ಹೆಚ್-150ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆ ಮತ್ತು ನಾಗಮಂಗಲ ತಾಲ್ಲೂಕು ದೇವಲಾಪುರ-ಮಾರ್ಕೋನಹಳ್ಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ರಾಜ್ಯ ಹೆದ್ದಾರಿ ರಸ್ತೆಯ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ರೂ.750.00 ಲಕ್ಷಗಳಿಗೆ ಕಾಮಗಾರಿ ಮತ್ತು ಕೋಳಾಲ-ತುರುವೇಕೆರೆ-ದಬ್ಬೇಘಟ್ಟ ರಸ್ತೆಯ (ಎಂ.ಡಿ.ಆರ್) ಸರಪಳಿ 0.00 ರಿಂದ 54.00 ಕಿಮೀ.ವರೆಗೆ ಕಾಮಗಾರಿಯನ್ನು ರೂ.1800.00 ಲಕ್ಷಗಳಿಗೆ ಕಾಮಗಾರಿ ಮಂಜೂರಾಗಿ ಪ್ರಸ್ತುತ ಕಾಮಗಾರಿ ಪೂರ್ಣಗೊಳಿಸಬೇಕಾದ ಸಮಯ ಮುಗಿದಿದ್ದರೂ ಇನ್ನೂ ಕಾಮಗಾರಿ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಸರ್ಕಾರದ ಗಮನಕ್ಕೆ ಬಂದಿದೆ.<br><br>ನಾಗಮಂಗಲ ತಾಲ್ಲೂಕಿನಲ್ಲಿಯ 1)ಕೋಳಾಲ, ತುರುವೇಕೆರೆ, ದಬ್ಬೆಘಟ್ಟ, ಚಾಮಲಾಪುರ, ಅದ್ದಿಹಳ್ಳಿ, ಕಾಂತಾಪುರ ಮಾರ್ಗ ರಾಜ್ಯಹೆದ್ದಾರಿ 19 (ಎನ್.ಹೆಚ್-150ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ಸರಪಳಿ: 1.00 ರಿಂದ 5.50 ಕಿ.ಮೀ. ವರೆಗೆ ಮತ್ತು 2)ದೇವಲಾಪುರ ಮಾರ್ಕೋನಹಳ್ಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ಸರಪಳಿ 1.40 ರಿಂದ 5.00 ಕಿ.ಮೀ. ವರೆಗೆ ರಸ್ತೆ ಅಭಿವೃದ್ಧಿಪಡಿಸುವ ರೂ.750.0ಲಕ್ಷ ಮೊತ್ತದ ಪ್ಯಾಕೇಜ್ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖಾವತಿಯಿಂದ ಕೈಗೊಳ್ಳಲಾಗುತ್ತಿದೆ.<br><br>ಸದರಿ ಕಾಮಗಾರಿಯನ್ನು ಟೆಂಡರ್ ಕರಾರು ಅನುಸಾರ ದಿನಾಂಕ:14.09.2020 ರಂದು ಗುತ್ತಿಗೆದಾರರಿಗೆ ವಹಿಸಲಾಗಿದ್ದು, ಕಾಮಗಾರಿಯನ್ನು ದಿನಾಂಕ:13.03.2021ಕ್ಕೆ ಪೂರ್ಣಗೊಳಿಸ ಬೇಕಾಗಿರುತ್ತದೆ.<br><br>ಸದರಿ ರಸ್ತೆಯಲ್ಲಿ ಒಟ್ಟು 4.00 ಕಿಮೀ ರಷ್ಟು ವೆಟ್ ಮಿಕ್ಸ್ ಕಾಮಗಾರಿ ಮುಗಿದಿದ್ದು, ಡಾಂಬರೀಕರಣ ಕಾಮಗಾರಿಯನ್ನು ಮಾಡಬೇಕಾಗಿರುತ್ತದೆ. ಮತ್ತು ದೇವಲಾಪುರ-ಮಾರ್ಕೋನಹಳ್ಳಿ ರಸ್ತೆಯಲ್ಲಿ ಕಾಂಕ್ರೀಟ್ ಚರಂಡಿ ಕಾಮಗಾರಿ ಮುಗಿದಿದ್ದು, ಜಿ.ಎಸ್.ಬಿ ಕಾಮಗಾರಿಯು ಬಾಕಿ ಇರುತ್ತದೆ.<br><br>ಕೋವಿಡ್-19 ರ ಹಿನ್ನಲೆಯಲ್ಲಿ ಕೆಲಸಗಾರರ ಕೊರತೆಯಿಂದಾಗಿ ಕಾಮಗಾರಿ ಪ್ರಗತಿ ತುಸು ಕುಂಠಿತವಾಗಿರುತ್ತದೆ. ಕುಂಠಿತ ಪ್ರಗತಿಯ ಬಗ್ಗೆ ಗುತ್ತಿಗೆದಾರರಿಗೆ ಉಪವಿಭಾಗ ಕಛೇರಿಯಿಂದ ಸದರಿ ಕಾಮಗಾರಿಗಳನ್ನು ಜರೂರು ಪೂರ್ಣಗೊಳಿಸುವಂತೆ ನೋಟೀಸ್ ನೀಡಲಾಗಿರುತ್ತದೆ. ಕಾಮಗಾರಿಯನ್ನು ತ್ವರಿತಗತಿಯಲ್ಲಿ ಕೈಗೊಂಡು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು.<br><br>ಕೋಳಾಲ-ತುರುವೇಕೆರೆ-ದಬ್ಬೇಘಟ್ಟ ರಸ್ತೆಯ |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| | | (ಎಂ.ಡಿ.ಆರ್) ಸರಪಳಿ 0.00 ರಿಂದ 54.00 ಕಿಮೀ.ವರೆಗೆ (ಆಯ್ದ ಭಾಗಗಳನ್ನು) ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ಹಂತ-4 (ಘಟ್ಟ-1)ರ ಪ್ಯಾಕೇಜ್ 329(ಬಿ) ರಡಿ ರೂ.1658.53 ಲಕ್ಷಗಳ ಅಂದಾಜು ಮೊತ್ತದ ರಸ್ತೆ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ಗುತ್ತಿಗೆ ಮೂಲಕ ಗುತ್ತಿಗೆದಾರರಾದ ಶ್ರೀ ಹೆಚ್.ಬಿ. ರವಿಕುಮಾರ್‌ರವರಿಗೆ ಟೆಂಡರ್ ಮೂಲಕ ವಹಿಸಲಾಗಿದೆ. ಗುತ್ತಿಗೆ ಕರಾರಿನನ್ವಯ ಗುತ್ತಿಗೆದಾರರಿಗೆ ಒಟ್ಟು 11 ತಿಂಗಳ ಕಾಲಾವಧಿಯನ್ನು ನಿಗಧಿಪಡಿಸಿದ್ದು, ದಿನಾಂಕ:11-06-2020ರೊಳಗೆ ಪೂರ್ಣಗೊಳಿಸಬೇಕಿತ್ತು. ಆದರೆ ಕೋವಿಡ್-19ರ ಲಾಕ್‌ಡೌನ್ ಪರಿಣಾಮದಿಂದಾಗಿ ಕಾಮಗಾರಿಗಳು ವಿಳಂಬವಾಗಿದ್ದು, ಕಾಲಾವಧಿ ವಿಸ್ತರಣೆ ನೀಡಬೇಕಾಗಿರುತ್ತದೆ. ಗುತ್ತಿಗೆದಾರರು ವಿಸ್ತರಿತ ಕಾಲಾವಧಿಯಲ್ಲಿಯೂ ಕಾಮಗಾರಿ ಪೂರ್ಣಗೊಳಿಸದಿದ್ದಲ್ಲಿ ಗುತ್ತಿಗೆ ಕರಾರಿನ ವಿಧಿ 49 ರನ್ವಯ ಕ್ರಮ ಕೈಗೊಳ್ಳಲಾಗುವುದು. |
| ಆ | ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಗುಣ ಮಟ್ಟ ಪರಿಶೀಲಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು (ವಿವರ ನೀಡುವುದು) | ಸದರಿ ಕಾಮಗಾರಿಗಳನ್ನು ಮಂಜೂರಾದ ಅಂದಾಜಿನಲ್ಲಿರುವಂತೆ ನಿರ್ವಹಿಸುತ್ತಿದ್ದು, ಕಾಮಗಾರಿಯ ಪ್ರತಿ ಹಂತದಲ್ಲೂ ಗುಣ ಮಟ್ಟವನ್ನು ಕಾಪಾಡಿಕೊಳ್ಳಲಾಗುತ್ತಿದೆ. |
| ಇ. | ಕಾಮಗಾರಿ ವಿಳಂಬದಿಂದ ಸುತ್ತಮುತ್ತಲಿನ ಸಾರ್ವಜನಿಕರಿಗೆ ದಿನನಿತ್ಯ ತಾಲ್ಲೂಕು ಕೇಂದ್ರಕ್ಕೆ ಓಡಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ತುರ್ತು ಕಾಮಗಾರಿಯನ್ನು ಗುಣಮಟ್ಟದಿಂದ ಪೂರ್ಣಗೊಳಿಸುವುದು ಯಾವಾಗ: (ವಿವರ ನೀಡುವುದು) | |
| ಈ. | ಸಂಬಂಧಪಟ್ಟ ಗುತ್ತಿಗೆದಾರರು ಮತ್ತು ಇಲಾಖಾ ಅಧಿಕಾರಿಗಳ ವಿರುದ್ಧ ಯಾವ ಶಿಸ್ತು ಕ್ರಮಕೈಗೊಳ್ಳಲಾಗಿದೆ (ವಿವರ ನೀಡುವುದು)? | |

ಲೋಇ 18 ಸಿಕ್ಯೂಎನ್ 2021(ಇ)

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು,
ಲೋಕೋಪಯೋಗಿ ಇಲಾಖೆ